ಕರ್ನಾಟಕ ಸರ್ಕಾರ

ಸಂಖ್ಯೆ:ಪಮೂಶಿ/ಶೈಶಾ/ಇ4/2020-21

ನಿರ್ದೇಶಕರ ಕಛೇರಿ.
ಪದವಿ ಪೂರ್ವ ಶಿಕ್ಷಣ ಇಲಾಖೆ
ಸಂಪಿಗೆ ರಸ್ತೆ. 18ನೇ ಕ್ರಾಸ್
ಮಲ್ಲೇಶ್ವರಂ. ಬೆಂಗಳೂರು-12
ದಿನಾಂಕ: 09-11-2020.

## ಪರಿಷ್ಕೃತ ಸುತ್ತೋಲೆ

ವಿಷಯ: CBSE board ನಲ್ಲಿ 11ನೇ ತರಗತಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರಸಕ್ತ ಸಾಲಿನಲ್ಲಿ ರಾಜ್ಯ ಪಠ್ಯಕ್ರಮದಲ್ಲಿ ವ್ಯಾಸಂಗವನ್ನು ಮುಂದುವರೆಸಲು ಅವಕಾಶ ನೀಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಪತ್ರ ಸಂಖ್ಯೆ ಇಪಿ 229 ಎಸ್‌ಹೆಚ್‌ಹೆಚ್ 2020 ದಿನಾಂಕ 04/11/2020.

2) ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ:ಪಮೂಶೀ/ಶೈಶಾ/ಇ4/2020-21 ದಿನಾಂಕ 05/11/2020

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ-1ರ ಪತ್ರದಂತೆ 2020-21ನೇ ಸಾಲಿಗೆ CBSE board ನಲ್ಲಿ 11ನೇ ತರಗತಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರಸಕ್ತ ಸಾಲಿನಲ್ಲಿ ರಾಜ್ಯ ಪಠ್ಯಕ್ರಮದಲ್ಲಿ 12ನೇ ತರಗತಿ (ದ್ವಿತೀಯ ಪಿಯುಸಿ)ವ್ಯಾಸಂಗವನ್ನು ಮುಂದುವರೆಸಲು ಪ್ರಸಕ್ತ ವರ್ಷಕ್ಕೆ ಮಾತ್ರ ದಾಖಲಾತಿಗೆ ಅವಕಾಶ ನೀಡಲಾಗಿದೆ. ಸಂಯೋಜನೆ ಹಾಗೂ ಭಾಷಾ ವಿಷಯವನ್ನು ಗಮನಿಸಿಕೊಂಡು ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಳ್ಳಲು ದಾಖಲಾತಿ ಮಾರ್ಗಸೂಚಿ ಅನ್ವಯ ಪೂರಕ ದಾಖಲೆಗಳೊಂದಿಗೆ ತಾತ್ಕಾಲಿಕ ಅರ್ಹತಾ ಪತ್ರ ಪಡೆಯಲು ಇಲಾಖೆಗೆ ಅರ್ಜಿಸಲ್ಲಿಸಿ, ತಾತ್ಕಾಲಿಕಾ ಅರ್ಹತಾ ಪತ್ರ ಪಡೆದುಕೊಂಡ ನಂತರ ವಿದ್ಯಾರ್ಥಿಗಳನ್ನು ದಾಖಲು ಮಾಡಿಕೊಳ್ಳುವುದು. ದಾಖಲಾತಿ ಮಾರ್ಗಸೂಚಿಯ ಪುಟ ಸಂಖ್ಯೆ 12ರಲ್ಲಿ ತಿಳಿಸಿದಂತೆ ವಿಶೇಷ ಸೂಚನೆಯನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಿದೆ. ಇದಕ್ಕೆ ಸಂಬಂಧಿಸಿದಂತೆ ದಿನಾಂಕ **05/11/2020ರ ಸುತ್ತೋಲೆಯನ್ನು ಹಿಂಪಡೆದಿದೆ.**

ಜಂಟಿ ನಿರ್ದೇಶಕರು (ತಾಂತ್ರಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು ಇವರ ಮುಖಾಂತರ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ ಮಾಹಿತಿ.
2. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ ಬೆಂಗಳೂರು ಇವರಿಗೆ ಜಿಲ್ಲಾ ಉಪ ನಿರ್ದೇಶಕರುಗಳ ಇ-ಮೇಲ್‌ಗೆ ಅಳವಡಿಸಲು.
3. ಕಛೇರಿ ಪ್ರತಿ.